ಮೆ|| ಸಂಡೂರು ಮ್ಯಾಂಗನೀಸ್ ಅಂಡ್ ಐರನ್ ಓರ್ ಲಿಮಿಟೆಡ್ ರವರು ಕಬ್ಬಿಣದ ಅದಿರಿನ ಉತ್ಪಾದನೆಯನ್ನು ವಾರ್ಷಿಕ 1.60 MTPA ಯಿಂದ 4.50 MTPA ಕ್ಕೆ, ಒಟ್ಟು ಉತ್ಪಾದನೆಯನ್ನು 26.42 MTPA (ಕಬ್ಬಿಣದ ಅದಿರಿನ ROM-7.85MTPA +ಮ್ಯಾಂಗನೀಸ್ ಅದಿರಿನ ROM-1.34 MTPA +ಮೆಲ್ಮಣ್ಣು 0.19 MTPA +ಘನತ್ಯಾಜ್ಯ 17.04 MTPA) ಪ್ರಸ್ತಾಪಿತ 7 MTPA ಅದಿರು ಶುದ್ಧೀಕರಣ (Benification Plant) ಘಟಕ ಪ್ರಸ್ತಾಪಿತ 1.2 KM ಉದ್ದ ಡೌನ್ ಹಿಲ್ ಕನ್ವೇಯರ್ ಬೆಲ್ಟ್ ವ್ಯವಸ್ಥೆ & 0.15 MTPA ಅದಿರಿನ ಸಂಸ್ಕರಣಾ ಘಟಕ (ಕ್ರಷಿಂಗ್ ಮತ್ತು ಸ್ಕ್ರೀನಿಂಗ್) ಯೋಜನೆಯ ಸ್ಥಾಪನೆಗಾಗಿ ಸ್ವಾಮಿಮಲೈ ಮತ್ತು ರಾಮನಮಲೈ ಫಾರೆಸ್ಟ್ ಬ್ಲಾಕ್ ದೇವಗಿರಿ, ಕಮ್ಮತೂರು, ಸುಬ್ಬರಾಯನ ಹಳ್ಳಿ ಹಾಗೂ ರಾಮಘಡ ಗ್ರಾಮಗಳು, ಸಂಡೂರು ತಾಲ್ಲೂಕು ಸ್ಥಾಪನೆ ಮಾಡುವ ಸಂಭಂದ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ದಿನಾಂಕ: 06-12-2022 ರಂದು ಬೆಳಿಗ್ಗೆ 11.00 ಗಂಟೆಗೆ ನಡೆದ ಪರಿಸರ ಸಾರ್ವಜನಿಕ ಸಭೆಯ ನಡುವಳಿಗಳು:-

| | | |
|---|---|---|
| ಪರಿಸರ ಕುರಿತಾದ ಸಾರ್ವಜನಿಕ ಆಲಿಕೆ ಸಭೆಯ ಸ್ಥಳ | | ಉದ್ದೇಶಿತ ಯೋಜನಾ ಸ್ಥಳ ಮೆ: ಸಂಡೂರು ಮ್ಯಾಂಗನೀಸ್ ಅಂಡ್ ಐರನ್ ಓರ್ ಲಿಮಿಟೆಡ್ ದೇವಗಿರಿ ಗ್ರಾಮ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ. |
| ಹಾಜರಿದ್ದ ಪರಿಸರ ಸಾರ್ವಜನಿಕ ವಿಚಾರಣಾ ಸಮಿತಿಯ ಸದಸ್ಯರುಗಳ ವಿವರ | | **ಪದನಾಮ** |
| 1. | ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಜಿಲ್ಲೆ | **ಅಧ್ಯಕ್ಷರು** |
| 2 | ಡಾ.ದೊಡ್ಡಶಾನಯ್ಯ ಹಿರಿಯ ಪರಿಸರ ಅಧಿಕಾರಿಗಳು, ಕ.ರಾ.ಮಾ.ನಿ.ಮಂ. ವಲಯ ಕಛೇರಿ, ಬಳ್ಳಾರಿ. | **ಸದಸ್ಯ ಸಮಾವೇಷಕರು** |
| **ಹಾಜರಿದ್ದ ಇತರ ಅಧಿಕಾರಿಗಳ ವಿವರ** | | |
| 1 | ಶ್ರೀ. ಹನುಮಂತಪ್ಪ ಹೆಚ್. ಸಹಾಯಕ ಪರಿಸರ ಅಧಿಕಾರಿ, ಕ.ರಾ.ಮಾ.ನಿ.ಮಂ.ಪ್ರಾಕ, ಬಳ್ಳಾರಿ | |
| 2 | ಶ್ರೀ. ರವಿ ಸಹಾಯಕ ಪರಿಸರ ಅಧಿಕಾರಿ, ಕ.ರಾ.ಮಾ.ನಿ.ಮಂ.ಪ್ರಾಕ, ಬಳ್ಳಾರಿ | |
| ಮೆ: ಸಂಡೂರು ಮ್ಯಾಂಗನೀಸ್ ಅಂಡ್ ಐರನ್ ಓರ್ ಲಿಮಿಟೆಡ್ ಉದ್ದಿಮೆಯ ವತಿಯಿಂದ ಹಾಜರಿದ್ದ ಪ್ರತಿನಿಧಿಗಳು. | | |
| 1. | ಶ್ರೀ ಅಬ್ದುಲ್ ಸಲೀಂ- ಡೈರೆಕ್ಟರ್ ಮೈನ್ಸ್ | |
| 2. | ಡಾ ನಜೀಮ ಬಾನು- ಸೀನಿಯರ್ ಮ್ಯಾನೇಜರ್ ಹೆಲ್ತ್ ಸರ್ವಿಸಸ್ | |
| 3. | ಶ್ರೀ ಶ್ರೀಧರ್ ಪಿ ಹೆಗಡೆ- ಜನರಲ್ ಮ್ಯಾನೇಜರ್ ಮೈನ್ಸ್ | |
| 4. | ಶ್ರೀ ಬಿಜಯ್ದೇಬ್ ಸಾಹು- ಜನರಲ್ ಮ್ಯಾನೇಜರ್ | |
| 5 | ಶ್ರೀ ದೀಪಕ್ ಕುಕ್ಕೆ ಅನಿಲ್ ಕುಮಾರ್ - ಸೀನಿಯರ್ ಮ್ಯಾನೇಜರ್ | |
| 6 | ಶ್ರೀ ಜೆ.ಎಂ. ಪ್ರಕಾಶ್-ಅಸಿಸ್ಟೆಂಟ್ ಜನರಲ್ ಮ್ಯಾನೇಜರ್ | |
| 7 | ಶ್ರೀ ರಾಜೇಶ್ ಎಂ- ಸೀನಿಯರ್ ಮ್ಯಾನೇಜರ್, ಜಿಯೋಲಾಜಿ | |
| 8 | ಶ್ರೀ ಬಚಲಪ್ಪ ಕೆ- ಎ.ಜಿ.ಎಮ್ ಮೈನ್ಸ್ | |

1. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಅಧಿಕಾರಿಗಳ ಸಹಿ ಇರುವ ಹಾಜರಾತಿ ಪಟ್ಟಿಯ ಪ್ರತಿಯನ್ನು **ಅನುಬಂಧ**-1 ರಲ್ಲಿ ಲಗತ್ತಿಸಲಾಗಿದೆ.
2. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಸಾರ್ವಜನಿಕರ ವಿಳಾಸ ಮತ್ತು ಸಹಿ ಇರುವ ಹಾಜರಾತಿ ಪಟ್ಟಿಯ ಪ್ರತಿಯನ್ನು **ಅನುಬಂಧ**-2 ರಲ್ಲಿ ಲಗತ್ತಿಸಲಾಗಿದೆ.

## ಪೀಠಿಕೆ

ಮೆ|| ಸಂಡೂರು ಮ್ಯಾಂಗನೀಸ್ ಅಂಡ್ ಐರನ್ ಓರ್ ಲಿಮಿಟೆಡ್ ರವರು ಕಬ್ಬಿಣದ ಅದಿರಿನ ಉತ್ಪಾದನೆಯನ್ನು ವಾರ್ಷಿಕ 1.60 MTPA ಯಿಂದ 4.50 MTPA ಕ್ಕೆ, ಒಟ್ಟು ಉತ್ಪಾದನೆಯನ್ನು 26.42 MTPA (ಕಬ್ಬಿಣದ ಅದಿರಿನ ROM-7.85MTPA +ಮ್ಯಾಂಗನೀಸ್ ಅದಿರಿನ ROM-1.34 MTPA +ಮೆಲ್ಮಣ್ಣು 0.19 MTPA +ಘನತ್ಯಾಜ್ಯ 17.04 MTPA) ಪ್ರಸ್ತಾಪಿತ 7 MTPA ಅದಿರು ಶುದ್ಧೀಕರಣ (Benification Plant) ಘಟಕ ಪ್ರಸ್ತಾಪಿತ 1.2 KM ಉದ್ದ ಡೌನ್ ಹಿಲ್ ಕನ್ವೇಯರ್ ಬೆಲ್ಟ್ ವ್ಯವಸ್ಥೆ & 0.15 MTPA ಅದಿರಿನ ಸಂಸ್ಕರಣಾ ಘಟಕ (ಕ್ರಷಿಂಗ್ ಮತ್ತು ಸ್ಕ್ರೀನಿಂಗ್) ಯೋಜನೆಯ ಸ್ಥಾಪನೆಗಾಗಿ ಸ್ವಾಮಿಮಲೈ ಮತ್ತು ರಾಮನಮಲೈ ಫಾರೆಸ್ಟ್ ಬ್ಲಾಕ್ ದೇವಗಿರಿ, ಕಮ್ಮತೂರು, ಸುಬ್ಬರಾಯನ ಹಳ್ಳಿ ಹಾಗೂ ರಾಮಘಡ ಗ್ರಾಮಗಳು, ಸಂಡೂರು ತಾಲ್ಲೂಕು ಮತ್ತು ಬಳ್ಳಾರಿ ಜಿಲ್ಲೆಯಲ್ಲಿ ಸ್ಥಾಪನೆಯ ಮಾಡುವ ಉದ್ದೇಶಕ್ಕಾಗಿ ಪ್ರಸ್ತಾವನೆಯನ್ನು ಮಾಡಿರುತ್ತಾರೆ.

ಕೇಂದ್ರ ಸರ್ಕಾರದ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ಇವರು ಪರಿಸರ (ಸಂರಕ್ಷಣೆ) ಕಾಯ್ದೆ 1986 ಅಡಿಯಲ್ಲಿ ದಿನಾಂಕ 14.09.2006 ರಲ್ಲಿ ಜಾರಿಗೊಳಿಸಿರುವ ಪರಿಸರ ಆಘಾತ ಅಧ್ಯಯನದ ಅಧಿಸೂಚನೆ (ತಿದ್ದುಪಡಿ ದಿನಾಂಕ 01.12.2009) ರನ್ವಯ ಯೋಜನಾ ಪ್ರವರ್ತಕರು ಸದರಿ ಯೋಜನೆಗೆ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುತ್ತದೆ.

ಸದರಿ ಉದ್ದೇಶಿತ ಯೋಜನೆಯು ಮೇಲೆ ತಿಳಿಸಿದ ಅಧಿಸೂಚನೆ ಅಡಿಯಲ್ಲಿ ಒಳಪಡುವುದರಿಂದ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುತ್ತದೆ.ಆ ಮೇರೆಗೆ ಯೋಜನಾ ಪ್ರವರ್ತಕರು ಪರಿಸರ ವಿಮೋಚನಾ ಪತ್ರವನ್ನು ಪಡೆಯಲು ಪರಿಸರ ಅರಣ್ಯ ಮತ್ತು ಹವಮಾನ ಬದಲಾವಣೆಯ ಸಚಿವಾಲಯ, ಭಾರತ ಸರ್ಕಾರ, ನವದೆಹಲಿ ಇವರು ಸದರಿ ಯೋಜನೆಯ ಟರ್ಮ್ಸ್ ಆಫ್ ರೆಫರೆನ್ಸ್ (TOR) ಸಂಖ್ಯೆF.No. IA-J-11015/45/2021-IA.II(M), ದಿನಾಂಕ: 14–01–2022 ಷರತ್ತುಬದ್ಧ ನಿಬಂಧನೆಗಳ ಅನ್ವಯ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸುವುದು ಕಡ್ಡಾಯವಾಗಿರುತ್ತದೆ.

ಯೋಜನಾ ಪ್ರವರ್ತಕರು ಷರತ್ತುಬದ್ಧ ನಿಬಂಧನೆಗಳನ್ನು ಪಾಲಿಸುವ ಸಲುವಾಗಿ ಮೆ. ಜಿ.ಎಸ್ ಎನ್ವಿಟೆಕ್ ಪ್ರೈ.ಲಿ. ಸಿಕಂದರಬಾದ್ ಇವರು ತಯಾರಿಸಿದ ಕರಡು ಪರಿಸರ ಆಘಾತ ಅಂದಾಜು ಅಧ್ಯಯನ ವರದಿ ಮತ್ತು ಕಾರ್ಯಕಾರಿ ಸಾರಾಂಶವನ್ನು ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಸಿದ್ಧಪಡಿಸಿ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ನಡೆಸಿಕೊಡಲು ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಬೆಂಗಳೂರು ಇವರಿಗೆ ದಿನಾಂಕ 26-09-2022 ರಂದು ಮನವಿ ಸಲ್ಲಿಸಿರುತ್ತಾರೆ.

ಯೋಜನಾ ಪ್ರವರ್ತಕರ ಸದರಿ ಮನವಿಯ ಮೇರೆಗೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವತಿಯಿಂದ ಜಿಲ್ಲಾಧಿಕಾರಿಗಳು, ಬಳ್ಳಾರಿ ಇವರಿಗೆ ಪರಿಸರ ಸಾರ್ವಜನಿಕ ಆಲಿಕಾ ಸಭೆ ನಡೆಸಲು ಸೂಕ್ತ ದಿನಾಂಕ ಹಾಗೂ ಸಮಯವನ್ನು ನೀಡಲು ದಿನಾಂಕ 15-10-2022 ಪತ್ರದ ಮೂಲಕ ಕೋರಲಾಗಿರುತ್ತದೆ.

ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ ರವರ ಆದೇಶದನ್ವಯ ದಿನಾಂಕ: 06-12-2022 ರಂದು ಬೆಳಗ್ಗೆ 11.00 ಗಂಟೆಗೆ ಯೋಜನಾ ಸ್ಥಳದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲು ಸಮ್ಮತಿ ಸೂಚಿಸಿರುತ್ತಾರೆ. ಈ ಸಭೆಗೆ ಪೂರಕವಾಗಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ರಾಜ್ಯ ಮಟ್ಟದ ಪ್ರಮುಖ ದಿನ ಪತ್ರಿಕೆಗಳಾದ ಕನ್ನಡಪ್ರಭ (ಕನ್ನಡ) ದಿನಾಂಕ 05-11-2022 ರಂದು ಹಾಗೂ ದಿ ಹಿಂದೂ(ಆಂಗ್ಲ) ಗಳಲ್ಲಿ ದಿನಾಂಕ 06-11-2022 ರಂದು ಪತ್ರಿಕಾ ಪ್ರಕಟಣೆ ಬಳ್ಳಾರಿ ಜಿಲ್ಲೆಯ ಸ್ಥಳೀಯ ದಿನಪತ್ರಿಕೆಯಾದ "ಈ ನಮ್ಮ ಕನ್ನಡ ನಾಡು" ಪತ್ರಿಕೆಯಲ್ಲಿ ಸಹ ದಿನಾಂಕ: 06-11-2022 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ ಕುರಿತಾದ ಪ್ರಕಟಣೆಯನ್ನು ನೀಡಲಾಗಿರುತ್ತದೆ. ಈ ಯೋಜನೆಗೆ ಸಂಬಂಧಿಸಿದಂತೆ ಸಾರ್ವಜನಿಕರ ಅನಿಸಿಕೆ / ಆಕ್ಷೇಪಣೆ / ಸೂಚನೆ / ಸಲಹೆ / ಅಭಿಪ್ರಾಯಗಳನ್ನು ಲಿಖಿತವಾಗಿ 30 ದಿನಗಳ ಒಳಗೆ ಸಲ್ಲಿಸಲು ಕೋರಲಾಗಿತ್ತು.

ಸದರಿ ಯೋಜನೆಗೆ ಸಂಬಂಧಿಸಿದಂತೆ ಯೋಜನಾ ಪ್ರವರ್ತಕರು ಸಲ್ಲಿಸಿದ್ದ ಕ್ಷಿಪ್ರ ಪರಿಸರ ಆಘಾತ ಅಂದಾಜು ಅಧ್ಯಯನದ ವರದಿ ಮತ್ತು ಕಾರ್ಯಕಾರಿ ಸಾರಂಶದ ಕನ್ನಡ ಮತ್ತು ಆಂಗ್ಲ ಭಾಷೆಯ ಪ್ರತಿಗಳನ್ನು ಈ ಕೆಳಕಂಡ ಸ್ಥಳಗಳಲ್ಲಿ ಸಾರ್ವಜನಿಕರ ಪರಾಮರ್ಶೆಗೆ ಇಡಲಾಗಿತ್ತು.

- ಮಾನ್ಯ ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬಳ್ಳಾರಿ.
- ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ಪಂಚಾಯತ್, ಬಳ್ಳಾರಿ.
- ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಬಳ್ಳಾರಿ.
- ತಹಶೀಲ್ದಾರರ ಕಾರ್ಯಾಲಯ, ಸಂಡೂರು
- ತಾಲ್ಲೂಕು ಪಂಚಾಯತಿ ಸಂಡೂರು.
- ಗ್ರಾಮ ಪಂಚಾಯತಿ ಕಾರ್ಯಾಲಯ, ದೇವಗಿರಿ ಗ್ರಾಮ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ
- ಗ್ರಾಮ ಪಂಚಾಯತಿ ಕಾರ್ಯಾಲಯ, ಸುಶೀಲನಗರ ಗ್ರಾಮ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆ
- ವಿಭಾಗಿಯ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳ, ಬಳ್ಳಾರಿ.
- ಪ್ರಾದೇಶಿಕ ಕಛೇರಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳ, ಬಳ್ಳಾರಿ.
- ಕೇಂದ್ರ ಪರಿಸರ ಅರಣ್ಯ ಮತ್ತು ಹವಮಾನ ಬದಲಾವಣೆ ಮಂತ್ರಾಲಯ, ದಕ್ಷಿಣ ವಲಯ ಕಛೇರಿ, ನಂ.ಇ-3/240, ಕೇಂದ್ರಿಯ ಸದನ, 4ನೇ ಮಹಡಿ, ಇ ಮತ್ತು ಎಫ್ ವಿಂಗ್ಸ್, 17ನೇ ಮುಖ್ಯರಸ್ತೆ, 2 ನೇ ಬ್ಲಾಕ್ ಕೋರಮಂಗಲ, ಬೆಂಗಳೂರು-560034
- ಸಹಾಯ ಕೇಂದ್ರ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳ, ನೆಲ ಅಂತಸ್ತು, ನಂ. 49, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು-560001

ಸದರಿ ಪರಿಸರ ಸಾರ್ವಜನಿಕ ಸಭೆಯ ಕುರಿತು ಮೇಲೆ ತಿಳಿಸಿದ ಎಲ್ಲಾ ಇಲಾಖೆಯವರಿಗೆ ಪರಿಸರ ಸಾರ್ವಜನಿಕ ಸಭೆಯ ದಿನಾಂಕ: 09-11-2022 ರಂದು ನಡೆಯುತ್ತಿರುವ ಕುರಿತು ಹಾಗೂ ಪತ್ರಿಕಾ ಪ್ರಕಟಣೆ ಬಗ್ಗೆ ಮಾಹಿತಿಯನ್ನು ನೀಡಲಾಗಿರುತ್ತದೆ.

ಯೋಜನಾ ಪ್ರದೇಶದ ಸುತ್ತಮುತ್ತಲಿನ ಸಾರ್ವಜನಿಕರಿಗೆ ಉದ್ದೇಶಿತ ವಿಸ್ತರಣಾ ಘಟಕದ ಕುರಿತು ಹಾಗು ಸಾರ್ವಜನಿಕ ಆಲಿಕಾ ಸಭೆ ನಡೆಯುವ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಉದ್ದಿಮೆಯ ಸುತ್ತಮುತ್ತಲಿನ ಹಳ್ಳಿಗಳಾದ (ನರಸಿಂಗ್‌ಪುರ, ರಂಜಿತಪುರ, ನವಲಟ್ಟಿ, ನಾರಯಣಪುರ, ದೇವಗಿರಿ, ಸುಬ್ರಾಯನಹಳ್ಳಿ, ಕಮ್ಮತ್ತೂರು, ಸ್ವಾಮಿಹಳ್ಳಿ, ತೋಣಸಗೇರಿ, ಯಶವಂತನಗರ, ಅಂಕಮ್ಮನಾಳ, ಸುಶೀಲನಗರ, ರಾಮಘಡ) ಗಳಲ್ಲಿ ಕರ ಪತ್ರಗಳನ್ನು ಹಂಚಲಾಗಿದ್ದು ಮತ್ತು ಧ್ವನಿವರ್ಧಕಗಳ ಮೂಲಕವು ಸಹ ಪ್ರಚಾರವನ್ನು ದಿನಾಂಕ 02-12-2022 ರಂದು ಮಾಡಲಾಗಿರುತ್ತದೆ. (ಛಾಯಾ ಚಿತ್ರಗಳನ್ನು ಅನುಬಂಧ-4 ರಲ್ಲಿ ಲಗತ್ತಿಸಿದೆ)

ಮಾನ್ಯ ಜಿಲ್ಲಾಧಿಕಾರಿಗಳು, ಬಳ್ಳಾರಿ ರವರ ಅಧಿಕೃತ ಜ್ಞಾಪನಾ ಪತ್ರದ ದಿನಾಂಕ 04-12-2022 ರ ಅನ್ವಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರಿಗೆ ಅಧಿಕಾರ ನೀಡಿ ದಿನಾಂಕ : 06-12-2022 ರಂದು ನಡೆಯುವ ಪರಿಸರ ಆಲಿಕೆ ಸಭೆಯನ್ನು ನಡೆಸಲು ಆದೇಶಿಸಿರುತ್ತಾರೆ. ಸದರಿ ಜ್ಞಾಪನಾ ಪತ್ರದ ಪ್ರತಿಯನ್ನು (ಅನುಬಂಧ-5 ರಂತೆ ಲಗತ್ತಿಸಿದೆ)

ಮೇಲೆ ತಿಳಿಸಿದ ಅಧಿಸೂಚನೆಯಲ್ಲಿನ ಎಲ್ಲಾ ವಿಧಿ-ವಿಧಾನಗಳನ್ನು ಕ್ರಮಬದ್ಧವಾಗಿ ನಿಯಮಾನುಸಾರ ಪಾಲಿಸಿ ದಿನಾಂಕ 06-12-2022 ರಂದು ಬೆಳಗ್ಗೆ 11.00 ಗಂಟೆಗೆ ಪರಿಸರ ಸಾರ್ವಜನಿಕ ಆಲಿಕೆ ಸಭೆಯನ್ನು ಮಾನ್ಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಇವರ ಅಧ್ಯಕ್ಷತೆಯಲ್ಲಿ ಯೋಜನಾ ಸ್ಥಳವಾದ ದೇವಗಿರಿ ಗ್ರಾಮ, ಸಂಡೂರು ತಾಲ್ಲೂಕು, ಬಳ್ಳಾರಿ ಜಿಲ್ಲೆಯಲ್ಲಿ ಪ್ರಾರಂಭಿಸಲಾಯಿತು.

**ಸಭೆಯ ನಡವಳಿಗಳು**

ಸದಸ್ಯ ಸಮಾವೇಶಕರು ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ, ಬಳ್ಳಾರಿ ಪ್ರಾದೇಶಿಕ ಕಛೇರಿಯ ಪರಿಸರ ಅಧಿಕಾರಿಗಳಾದ ಡಾ.ದೊಡ್ಡಶಾನಯ್ಯ ಅವರು ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ಮತ್ತು ಅವರಿಗೆ ಸ್ವಾಗತ ಕೋರಿದರು. ಮೆ॥ ಸಂಡೂರು ಮ್ಯಾಂಗನೀಸ್ ಅಂಡ್ ಐರನ್ ಓರ್ ಲಿಮಿಟೆಡ್ ಕಂಪನಿಯ ಪ್ರತಿನಿಧಿಗಳಿಗೆ, ಅಧಿಕಾರಿಗಳಿಗೆ, ಎಲ್ಲಾ ಸಾರ್ವಜನಿಕರಿಗೆ, ಪತ್ರಕರ್ತರಿಗೆ ಹಾಗೂ ಇತರೆ ಇಲಾಖೆಯ ಅಧಿಕಾರಿಗಳಿಗೆ ಸ್ವಾಗತ ಕೋರಿದರು ಹಾಗೂ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಮಂತ್ರಾಲಯ, ಕೇಂದ್ರ ಸರ್ಕಾರ, ಇವರು ಪರಿಸರ(ಸಂರಕ್ಷಣೆ)ಕಾಯ್ದೆ, 1986 ರಡಿಯಲ್ಲಿ ದಿನಾಂಕ : 14-09-2006 ರಲ್ಲಿ ಜಾರಿಗೊಳಿಸಿರುವ ಪರಿಸರ ಆಘಾತ ಅಧ್ಯಯನದ ಅಧಿಸೂಚನೆ ಬಗ್ಗೆ ಸಂಕ್ಷಿಪ್ತವಾಗಿ ವಿವರಣೆ ನೀಡಿದರು. ಸದರಿ ಯೋಜನೆಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ಪರಿಸರ ವಿಮೋಚನಾ ಪತ್ರ ಪಡೆಯಬೇಕಾಗಿರುವ ವಿಷಯವನ್ನು ಸಹ ಸಭೆಗೆ ತಿಳಿಸಿದರು. ಸಾರ್ವಜನಿಕ ಪರಿಸರ ಆಲಿಕೆ ಸಭೆಯ ಪೂರ್ವದಲ್ಲಿ ನಿಯಮಾನುಸಾರ ಕೈಗೊಂಡ ಕ್ರಮಗಳ ಬಗ್ಗೆ ವಿವರಣೆಯನ್ನು ನೀಡಿದರು ಹಾಗೂ ಸಾರ್ವಜನಿಕ ಆಲಿಕೆಯ ಸಭೆಯ ಅಧ್ಯಕ್ಷತೆಯನ್ನು ವಹಿಸುವಂತೆ ಮತ್ತು ಸಭೆಯನ್ನು ನಡೆಸಿಕೊಡುವಂತೆ ಮಾನ್ಯ ಅಪರ ಜಿಲ್ಲಾಧಿಕಾರಿಗಳನ್ನು ಕೋರಿದರು.

ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರು ಸಭೆಯನ್ನು ಉದ್ದೇಶಿಸಿ ಯೋಜನೆಗೆ ಪರಿಸರ ಸಾರ್ವಜನಿಕ ವಿಚಾರಣೆಯನ್ನು ನಡೆಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು. ಪರಿಸರ ಆಘಾತ ಅಧ್ಯಯನ ಅಧಿಸೂಚನೆ ದಿನಾಂಕ: 14-09-2006 ರ ಬಗ್ಗೆ ವಿವರವಾದ ಮಾಹಿತಿಯನ್ನು ಸಭೆಯಲ್ಲಿದ್ದ ಸಾರ್ವಜನಿಕರಿಗೆ ತಿಳಿಸಿದರು ಹಾಗೂ ಪರಿಸರ ಸಾರ್ವಜನಿಕ ವಿಚಾರಣೆಯ ಅಗತ್ಯತೆಯನ್ನು ಸಂಕ್ಷಿಪ್ತವಾಗಿ ವಿವರಿಸಿದರು.

ಪ್ರಸ್ತಾವಿತ ಯೋಜನೆಯ ಪವರ್ ಪಾಯಿಂಟ್ ಪ್ರಸ್ತುತಿಯನ್ನು ನೀಡುವಂತೆ ಅವರು ಯೋಜನಾ ಪ್ರತಿಪಾದಕರಿಗೆ ಮಾಹಿತಿ ನೀಡಿದರು, ಅಲ್ಲಿ ವಿಚಾರಣೆಗೆ ಹಾಜರಿದ್ದ ಸಾರ್ವಜನಿಕರು ಪರಿಸರ ಸಮಸ್ಯೆಗಳ ಕುರಿತು ಉದ್ದೇಶಿತ ಯೋಜನೆಗೆ ತಮ್ಮ ಎಲ್ಲಾ ಅಭಿಪ್ರಾಯ/ಸಲಹೆ/ಪತ್ರಗಳನ್ನು ಯೋಜನೆಯ ಬಗ್ಗೆ ಲಿಖಿತ ಅಥವಾ ಮೌಖಿಕವಾಗಿ ಪ್ರಸ್ತುತಪಡಿಸುವಂತೆ ವಿನಂತಿಸಿಕೊಂಡರು. ಈ ನಡವಳಿಯು ಲಿಖಿತ ದಾಖಲೆ ಮತ್ತು ವಿಡಿಯೋಗ್ರಾಫಿ ಎರಡನ್ನು ಒಳಗೊಂಡಿದೆ ಎಂದು ಸಭೆಗೆ ತಿಳಿಸಿದರು.

ಅದರಂತೆ, ಮೆ॥ ಸಂಡೂರು ಮ್ಯಾಂಗನೀಸ್ ಅಂಡ್ ಐರನ್ ಓರ್ ಲಿಮಿಟೆಡ್ ರವರ ಪರವಾಗಿ ಶ್ರೀ ದೀಪಕ್ ಕುಕ್ಕೆ ಅನಿಲ್ ಕುಮಾರ್ - ಸೀನಿಯರ್ ಮ್ಯಾನೇಜರ್ ಇವರು ಮೆ. ಜಿ.ಎಸ್ ಎನ್ವಿಟೆಕ್ ಪ್ರೈ.ಲಿ. ಸಿಕಂದರಬಾದ್ ರವರು ತಯಾರಿಸಿರುವ ಕ್ರಿಯಾತ್ಮಕ ಸಾರಾಂಶದಲ್ಲಿ ತಿಳಿಸಿರುವ ಕ್ರಮಗಳು, ಶಬ್ದದ ಮಟ್ಟದ ಸುಧಾರಿತ ಕ್ರಮಗಳು, ನೀರಿನ ಗುಣಮಟ್ಟ ಸುಧಾರಿತ ಕ್ರಮಗಳು, ಗಾಳಿಯ ಗುಣಮಟ್ಟ ಸುಧಾರಿತ ಕ್ರಮಗಳು, ಮಣ್ಣಿನ ಗುಣಮಟ್ಟದ ಸುಧಾರಿತ ಕ್ರಮಗಳು, ಜಮೀನಿನ ಬಳಕೆ, ಸಸ್ಯೀಕರಣ ಫೋಟೊಗಳು, ಗಣಿ ಗುತ್ತಿಗೆ ಪ್ರದೇಶದೊಳಗಿನ ರಕ್ಷಣಾತ್ಮಕ ಕ್ರಮಗಳ ಫೋಟೊ, ಪರಿಸರ ರಕ್ಷಣೆಯ ಬಜೆಟ್ ಚಟುವಟಿಕೆಗಳನ್ನೊಳಗೊಂಡ ವಿವರಗಳನ್ನು ಪವರ್ ಪಾಯಿಂಟ್ ಮೂಲಕ ಸಭೆಗೆ ಮಂಡಿಸಿದರು ಮತ್ತು ಉದ್ದಿಮೆಯ ಸಿ.ಎಸ್.ಆರ್. ಅಡಿಯಲ್ಲಿ ತೆಗೆದುಕೊಂಡಿರುವ ವಿವಿಧ ಚಟುವಟಿಕೆಗಳನ್ನೊಳಗೊಂಡ ವಿವರಗಳನ್ನು ಪವರ್ ಪಾಯಿಂಟ್ ಮೂಲಕ ಸಭೆಗೆ ಮಂಡಿಸಿದರು.

ಸಭೆಯ ಅಧ್ಯಕ್ಷರು ಈ ಉದ್ದೇಶಿತ ಯೋಜನೆಯ ಬಗ್ಗೆ ಪರಿಸರ ಕುರಿತಾಗಿ ಯಾವುದೇಸಲಹೆ/ಅನಿಸಿಕೆ/ಅಭಿಪ್ರಾಯ/ಸೂಚನೆಗಳು ಯಾವುದಾದರೂ ಇದ್ದಲ್ಲಿ ಸಭೆಗೆ ಮಂಡಿಸುವಂತೆ ಸಭೆಯಲ್ಲಿ ನೆರೆದಿದ್ದ ಸಾರ್ವಜನಿಕರನ್ನು ಕೋರಿದರು.

ಆಮೇರೆಗೆ ಸಾರ್ವಜನಿಕರು ಯೋಜನೆಯ ಬಗ್ಗೆ ತಮ್ಮ ಸಲಹೆ/ಅನಿಸಿಕೆ/ಅಭಿಪ್ರಾಯ/ಸೂಚನೆಗಳನ್ನು ಈ ಕೆಳಕಂಡಂತೆ ಮಂಡಿಸಿದರು.

1. **ಶ್ರೀ.ಹುಲ್ಲೇಶಿ ದೇವಗಿರಿ ಗ್ರಾಮ**– ರವರು ಮಾತನಾಡುತ್ತಾ ಕಂಪನಿಯವರು ಯೋಜನಾ ವರದಿಯಲ್ಲಿ ತೋರಿಸಿರುವ ಎಲ್ಲಾ ನಿಯಂತ್ರಣ ಕ್ರಮಗಳನ್ನು ಅನುಷ್ಠಾನ ಗೊಳಿಸಿರುವುದಾಗಿ ಸಭೆಗೆ ತಿಳಿಸಿದರು. ಸ್ಮಯೋರ್ ಕಂಪನಿಯವರು ಸ್ಥಳೀಯ ಗ್ರಾಮಸ್ಥರಿಗೆ ಎಲ್ಲಾ ರೀತಿಯ ನೆರವು ಮತ್ತು ಅನುಕೂಲಗಳನ್ನು ಮಾಡಿಕೊಟ್ಟಿರುವುದಾಗಿ ಮಾಹಿತಿ ನೀಡಿದರು. ಸ್ಮಯೋರ್ ಕಂಪನಿಯನ್ನು ಎರಡನೇ ಸರ್ಕಾರ ಎಂದರೆ ತಪ್ಪಾಗಲಾರದು ಎಂದು ತಿಳಿಸಿದರು. ಬೇರೆ ಕಂಪನಿಗಳು ಸ್ಮಯೋರ್ ಕಂಪನಿಗಿಂತ ಹೆಚ್ಚಿನ ವೇತನವನ್ನು ನೀಡಿದರೂ ಸಹ ತಾವು ಬೇರೆ ಕಂಪನಿಯಲ್ಲಿ ಕೆಲಸ ಮಾಡಲು ಹೋಗುವುದಿಲ್ಲ ಎಂದರು. ತಾವು ೩೦ ವರ್ಷಗಳಿಂದ ಸದರಿ ಕಂಪನಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು ನಮ್ಮ ತಂದೆ, ತಾಯಿಯರಂತೆ ಇದೇ ಕಂಪನಿಯಲ್ಲಿ ನಿವೃತಿ ಹೊಂದಲು ಬಯಸುವುದಾಗಿ ತಿಳಿಸಿದರು. ಕಂಪನಿಯು ತನ್ನ ಕಾರ್ಮಿಕರ ಮತ್ತು ಕುಟುಂಬ ವರ್ಗದವರ ಜೀವನ ನಿರ್ವಹಿಸುವ ಕಾರ್ಮಿಕರು ಸುಖಕರ ಜೀವನ ನಡೆಸಲು ಸಹಕಾರ ನೀಡುತ್ತಿರುವುದರಿಂದ ದೇವಗಿರಿ ಗ್ರಾಮವನ್ನು ದೇವರಗಿರಿ ಎನ್ನಬಹುದು ಎಂದು ತಿಳಿಸಿದರು. ಸ್ಮಯೋರ್ ಕಂಪನಿಯ ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಲು ಅನುಮತಿ ಕೋರಿದ್ದು ಅನುಮತಿಯನ್ನು ಸರ್ಕಾರ ನೀಡಿದರೆ ತುಂಬ ಅನುಕೂಲವಾಗುತ್ತದೆ ಎಂದು ತಿಳಿಸಿದರು. ಸಾಮರ್ಥ್ಯವನ್ನು ಹೆಚ್ಚಿಸಲು ಅನುಮತಿ ನೀಡುವುದರಿಂದ ನಿರುದ್ಯೋಗ ಸಮಸ್ಯೆ ಬಗೆಹರಿಯುತ್ತದೆ ಆದ್ದರಿಂದ ಸದರಿ ಯೋಜನೆಗೆ ಅನುಮತಿ ನೀಡುವಂತೆ ಮನವಿ ಮಾಡಿದರು.

2. **ಶ್ರೀ ಎಮ್ ಸತೀಶ್ ಪರಿಸರ ಸಂರಕ್ಷಣಾ ವೇದಿಕೆ ಅಧ್ಯಕ್ಷರು ಸಂಡೂರು**– ರವರು ಮಾತನಾಡುತ್ತಾ, ಸ್ಮಯೋರ್ ಕಂಪನಿಯು ಇತಿಹಾಸ ಪ್ರಸಿದ್ಧವಾಗಿದೆ ಎಂದು ಅಭಿಪ್ರಾಯ ಪಟ್ಟರು. ಸದರಿ ಕಂಪನಿಯು ಪ್ರಾರಂಭವಾಗಿ ೪೦೦ ವರ್ಷಗಳಾಗಿವೆ ಎಂದರು. ಸಿದ್ಧೋಜಿರಾವ್ ರವರ ಸ್ಮಯೋರ್ ಕಂಪನಿಯ ಮತ್ತು ಸಂಸ್ಥಾನದ ನಿರ್ಮಾತೃ ಎಂದು ಸಭೆಗೆ ತಿಳಿಸಿದರು. ಕಂಪನಿಯು ಪ್ರಾರಂಭದಿಂದ ಇಲ್ಲಿಯವರೆಗೆ ಯಾವುದೇ ವಿಷಯದಲ್ಲಿ ಹೊಂದಣಿಕೆ ಮಾಡಿಕೊಳ್ಳದೆ ಸ್ಥಿರತೆಯೊಂದಿಗೆ ಕಾರ್ಯಾಚರಣೆ ನಡೆಸುತ್ತಿದೆ ಎಂದು ತಿಳಿಸಿದರು. ಸ್ಮಯೋರ್ ಕಂಪನಿಯು ಪರಿಸರಕ್ಕೆ ಸಂಬಂಧಿಸಿದ ಯಾವುದೇ ನಿಯಮಗಳನ್ನು ಯಾವುದೇ ಸಂರ್ಭದಲ್ಲಿ ಉಲ್ಲಂಘಿಸದೆ ಪರಿಸರದ ಸಂರಕ್ಷಣೆ ಮಾಡುತ್ತ ಕೆಲಸ ನಿರ್ವಹಿಸುತ್ತಿರುವುದಾಗಿ ತಿಳಿಸಿದರು. ಸದರಿ ಕಂಪನಿಯು ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಎಲ್ಲಾ ಸಂಘ ಸಂಸ್ಥೆಗಳ ಪರವಾಗಿ ಬೆಂಬಲ ನೀಡುವುದಾಗಿ ತಿಳಿಸಿ ಸದರಿ ಯೋಜನೆಯನ್ನು ಸ್ವಾಗತಿಸಿದರು.

3. **ಶ್ರೀ. ಎ. ಪಕೀರಸ್ವಾಮಿ ವಿಜಯನಗರ ಜಿಲ್ಲೆ**– ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯು ಉನ್ನತ ದರ್ಜೆಯ ಕಂನಿಯಾಗಿದ್ದು ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಸಲ್ಲಿಸಿರುವ ಪ್ರಸ್ತಾವನೆಯನ್ನು ಅಂಗೀಕರಿಸುವಂತೆ ಮತ್ತು ಸದರಿ ಯೋಜನೆಯನ್ನು ಪ್ರಾರಂಭಿಸಲು ಅನುಮತಿ ನೀಡುವಂತೆ ಮನವಿ ಮಾಡಿದರು.

4. **ಸ್ವರ್ಣಲತ ಗ್ರಾಮ ಪಂಚಾಯ್ತಿ ಅಧ್ಯಕ್ಷರು ದೇವಗಿರಿ**– ರವರು ಮಾತನಾಡುತ್ತಾ ಸದರಿ ಯೋಜನೆಯಿಂದ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗಾವಕಾಶಗಳು ದೊರಕುತ್ತವೆ ಎಂದು ಅಭಿಪ್ರಾಯ ಪಟ್ಟರು. ಕಂಪನಿಯು ತಮ್ಮ ಗ್ರಾಮದ ಶಾಲಾ ವಿದ್ಯಾರ್ಥಿಗಳಿಗೆ ಸಾರಿಗೆ ವ್ಯವಸ್ಥೆ ಮಾಡಿರುವುದಾಗಿ ತಿಳಿಸಿದರು. ತಮ್ಮ ಗ್ರಾಮದ ನಿವಾಸಿಗಳಿಗೆ ಕಂಪನಿಯಲ್ಲಿ ಉದ್ಯೋಗ ಕೊಟ್ಟು ಅವರ ಕುಟುಂಬ ನಿರ್ವಹಣೆಗೆ ಸಹಾಯ ಮಾಡಿರುವುದಾಗಿ ತಿಳಿಸಿದರು. ಸ್ಮಯೋರ್ ಕಂಪನಿಯು ದೇವಗಿರಿ ಗ್ರಾಮದಲ್ಲಿ ಶಾಲೆಗಳನ್ನು, ದೇವಸ್ಥಾನಗಳನ್ನು ನಿರ್ಮಿಸಿ ಗ್ರಾಮವನ್ನು ಅಭಿವೃದ್ಧಿ ಪಡಿಸಿರುವುದರಿಂದ ಕಂಪನಿಯು ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಅನುಮತಿ ನೀಡುವಂತೆ ಮನವಿ ಮಾಡಿದರು.

5. **ಶ್ರೀ. ಜಿ.ಕೆ. ಮಂಜುನಾಥ್**– ರವರು ಮಾತನಾಡುತ್ತಾ ಕುಟುಂಬ ನಿರ್ವಹಣೆ ಮಾಡುವುದು ಹೇಗೆ ಎಂಬುವುದನ್ನು ಸ್ಮಯೋರ್ ಕಂಪನಿಯಿಂದ ಕಲಿಯಬೇಕಾಗಿದೆ ಎಂದರು. ಕಂಪನಿಯು ತನ್ನ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಅನುಕೂಲ ಮಾಡಿರುವುದಾಗಿ ತಿಳಿಸಿದರು. ಸ್ಮಯೋರ್ ಕಂಪನಿ ಮಾಲೀಕರು ಯಶವಂತನಗರ ಗ್ರಾಮದಲ್ಲಿ ಸ್ಥಳೀಯ ವಿದ್ಯಾರ್ಥಿಗಳ ಹಿತ ದೃಷ್ಟಿಯಿಂದ ನಿರ್ಮಿಸಿರುವ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡಿದ ವಿದ್ಯಾರ್ಥಿಗಳು ದೇಶ ವಿದೇಶಗಳಲ್ಲಿ ಉದ್ಯೋಗ ಮಾಡುತ್ತಿರುವುದಾಗಿ ಸಭೆಗೆ ತಿಳಿಸಿದರು. ಕಂಪನಿಯು ತನ್ನ ಕಾರ್ಮಿಕರಿಗೆ ಆಹಾರಧಾನ್ಯಗಳನ್ನು ಪ್ರಾರಂಭದಿಂದ ಇಲ್ಲಿಯವರೆಗೂ ವಿತರಿಸುತ್ತಿರುವುದಾಗಿ ತಿಳಿಸಿದರು. ಕಂಪನಿಯು ಸ್ಥಳಿಯರಿಗೆ ಎಲ್ಲಾ ರೀತಿಯಲ್ಲಿಯೂ ನೆರವನ್ನು ನೀಡಿರುವುದರಿಂದ ಕಂಪನಿಗೆ ತನ್ನ ಸಾಮಾರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಅನುಮತಿ ನೀಡುವಂತೆ ಮನವಿ ಮಾಡಿದರು.

6. **ಶ್ರೀ ಮಾಳಗಿ ಜಿ ಪೆನ್ನಪ್ಪ ಕಮ್ಮತೂರು ಗ್ರಾಮ**– ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯಿಯು ಸ್ಥಳೀಯರಿಗೆ ಇನಾಮು ಜಮೀನುಗಳನ್ನು ನೀಡಿರುವುದಾಗಿ ತಿಳಿಸಿದರು. ರಾಜ ಸಂಸ್ಥಾನದವರು ನೀಡಿರುವ ಜಮೀನುಗಳಿಗೆ ಸರ್ವೆ ಸೆಟ್ಲಮೆಂಟ್ ಆಗುವ ಸಮಯದಲ್ಲಿ ಸರ್ಕಾರದ ನಿಯಮಗಳಿಂದಾಗಿ ರೈತರಿಗೆ ಬಹಳಷ್ಟು ತೊಂದರೆಗಳಾಗಿರುವುದಾಗಿ ಬೇಸರ ವ್ಯಕ್ತಪಡಿಸಿದರು. ಗ್ರಾಮದ ರೈತರ ಸರ್ವೇ ಸೆಟ್ಲಮೆಂಟ್ ಆಗುವ ಮೊದಲೇ ಬಂಡವಾಳ ಶಾಹಿಗಳಿಗೆ ರೈತರ ಭೂಮಿಗಳನ್ನು ರೈತರ ಒಪ್ಪಿಗೆ ಇಲ್ಲದೇ ನೀಡಿರುವುದಾಗಿ ತಿಳಿಸಿದರು. ಸ್ಮಯೋರ್ ಕಂಪನಿಯು ತನ್ನ ಒಳ್ಳೆಯತನದಿಂದ ಉಳಿದುಕೊಂಡಿರುವುದಾಗಿ ಅಭಿಪ್ರಾಯ ಪಟ್ಟರು. ತಮ್ಮ ಗ್ರಾಮದ ಬುಡಕಟ್ಟು ಜನಾಂಗಕ್ಕೆ ಸೇರಿದ ಸುಮಾರು 1400 ಎಕರೆಯಷ್ಟು ಕೃಷಿ ಭೂಮಿಯನ್ನು ಎನ್.ಎಂ.ಡಿ.ಸಿ ಕಂಪನಿಯವರ ಹೆಸರಿಗೆ ನೊಂದಣಿ ಮಾಡಿದ್ದು ಅದನ್ನು ಕೂಡಲೇ ಸ್ಥಗಿತಗೊಳಿಸಿ ಸಾಗುವಳಿ ಮಾಡುತ್ತಿರುವ ರೈತರ ಹೆಸರಿಗೆ ಸಾಗುವಳಿ ಚೀಟಿ ವಿತರಿಸುವಂತೆ ಮನವಿ ಮಾಡಿದರು. ಅದಿರು ಶುದ್ಧೀಕರಣ ಘಟಕಕ್ಕೆ ಸಾಕಷ್ಟು ನೀರಿನ ಅಗತ್ಯವಿದ್ದು, ನೀರಿನ ಪೂರೈಕೆಗಾಗಿ ಗಣಿ ಪ್ರದೇಶದಲ್ಲಿ ಬೋರ್‌ವೆಲ್‌ಗಳನ್ನು ಕೊರೆಯದಂತೆ ಮನವಿ ಮಾಡಿದರು. ನೈಸರ್ಗಿಕ ಸಂಪತನ್ನು ಮಿತವಾಗಿ ಬಳಸುವಂತೆ ಕಂಪನಿಯವರಿಗೆ ಮನವಿ ಮಾಡಿದರು. ಸ್ಥಳಿಯರಿಗೆ ಹೆಚ್ಚಿನ ಪ್ರಮಾಣದಲ್ಲಿ ಉದ್ಯೋಗ ನೀಡುವಂತೆ ಮನವಿ ಮಾಡಿದರು.

7. **ಶ್ರೀ ಚಂದ್ರಪ್ಪ, ನಾರಾಯಣಪುರ ಗ್ರಾಮ**– ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯವರು ತಮ್ಮ ಗ್ರಾಮದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ 2009 ರಿಂದ ಇಲ್ಲಿಯವರೆಗೆ ಸಾರಿಗೆ ವ್ಯವಸ್ಥೆಯನ್ನು ಮಾಡಿಕೊಟ್ಟಿರುವುದಾಗಿ ತಿಳಿಸಿದರು. ಕಂಪನಿಯವರು ತಮ್ಮ ಗ್ರಾಮದಲ್ಲಿ 300 ಶೌಚಾಲಯಗಳನ್ನು ನಿರ್ಮಾಣ ಮಾಡಿರುವುದಾಗಿ ತಿಳಿಸಿದರು. ಸದರಿ ಕಂಪನಿ ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳುವುದಕ್ಕೆ ತಮ್ಮ ಸಂಪೂರ್ಣ ಒಪ್ಪಿಗೆ ಇರುವುದಾಗಿ ತಿಳಿಸಿದರು.

8. **ಶ್ರೀ ಸೂರ್ಯಪ್ರಕಾಶ್ ಯಶವಂತನಗರ ಗ್ರಾಮ**– ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯು ಸಂಡೂರಿನ ತಾಲೂಕಿನ ಎಲ್ಲಾ ಗ್ರಾಮಗಳಿಗೆ ಉಪಯೋಗವಾಗುವಂತಹ ಒಳ್ಳೆಯ ಕೆಲಸಗಳನ್ನು ಮಾಡಿಕೊಂಡು ಬಂದಿರುವುದಾಗಿ ತಿಳಿಸಿದರು. ಸುತ್ತಮುತ್ತಲಿನ ಗ್ರಾಮಗಳಿಗೆ ಸ್ಮಯೋರ್ ಕಂಪನಿ ವತಿಯಿಂದ ಶೌಚಾಲಯಗಳನ್ನು ನಿರ್ಮಿಸಿಕೊಟ್ಟಿರುವುದರಿಂದ ಗ್ರಾಮಗಳ ಮಹಿಳೆಯರಿಗೆ ತುಂಬಾ ಅನುಕೂಲವಾಗಿದೆ ಎಂದು ತಿಳಿಸಿದರು. ಸ್ಮಯೋರ್ ಕಂಪನಿಯವರು ಹಿಂದಿನಿಂದಲೂ ಸ್ಥಳೀಯ ಗ್ರಾಮಗಳ ಅಭಿವೃದ್ಧಿಗೆ ಸಹಾಯ ಮಾಡಿಕೊಂಡು ಬಂದಿರುವ ಹಿನ್ನಲೆಯಲ್ಲಿ ಕಂಪನಿಯು ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಅನುಮತಿಯನ್ನು ನೀಡುವಂತೆ ಮನವಿ ಮಾಡಿದರು.

9. **ಶ್ರೀ ಭೀಮೇಶ್ ಯರಬನಹಳ್ಳಿ ಗ್ರಾಮ ಪಂಚಾಯ್ತಿ ಸದಸ್ಯರು**– ರವರು ಮಾತನಾಡುತ್ತಾ ಸಯೋರ್ ಮೈನಿಂಗ್ ಕಂಪನಿಯು ಮೊದಲನೇ ಸ್ಥಾನದಲ್ಲಿದ್ದು ಸದರಿ ಕಂಪನಿಗೆ ಪರವಾನಿಗೆಯನ್ನು ನೀಡುವಂತೆ ಕೋರಿದರು. ಸದರಿ ಮೈನಿಂಗ್ ಕಂಪನಿಯು ಸುತ್ತಮುತ್ತಲಿನ ಗ್ರಾಮಗಳಿಗೆ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿರುವುದರಿಂದ ಗ್ರಾಮಸ್ಥರು ಕಂಪನಿಯ ಸಹಕಾರವನ್ನು ಪ್ರತಿದಿನ ಸರಿಸಿಕೊಂಡು ಜೀವನ ಸಾಗಿಸುತ್ತಿರುವುದಾಗಿ ತಿಳಿಸಿದರು. ಸ್ಥಳೀಯವಾಗಿ ವಿದ್ಯಾವಂತ ಯುವಕರು ಉದ್ಯೋಗವಿಲ್ಲದೇ

ಮನೆಯಲ್ಲಿದ್ದು ಅಂತಹ ನಿರುದ್ಯೋಗಿ ಯುವಕರಿಗೆ ಉದ್ಯೋಗ ನೀಡುವಂತೆ ಮನವಿ ಮಾಡಿದರು. ಗ್ರಾಮಗಳಿಗೆ ಸಿ.ಸಿ ರಸ್ತೆ ಚರಂಡಿ ಮುಂತಾದ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಕಾರ್ಖಾನೆಯವರಲ್ಲಿ ಮನವಿ ಮಾಡಿದರು. ಸದರಿ ಯೋಜನೆಗೆ ಅನುಮತಿ ನೀಡುವಂತೆ ಮನವಿ ಮಾಡಿದರು.

10. **ಶ್ರೀ ಎನ್ ಓಂಕಾರಪ್ಪ, ಸ್ವಾಮಿಹಳ್ಳಿ ಗ್ರಾಮ–** ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯವರು ಸ್ವಾಮಿಹಳ್ಳಿ ಗ್ರಾಮದ ಜಮೀನನ್ನು ಸಮತಟ್ಟು ಮಾಡಿ ಸಹಕಾರ ನೀಡಿರುವುದಾಗಿ ತಿಳಿಸಿದರು. ಸ್ವಾಮಿಹಳ್ಳಿ ಗ್ರಾಮದ ಶಾಲೆಯನ್ನು ಅಭಿವೃದ್ಧಿ ಮಾಡಿರುವುದಾಗಿ ತಿಳಿಸಿದರು. ತಮ್ಮ ಗ್ರಾಮಕ್ಕೆ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿಕೊಟ್ಟಿರುವ ಸ್ಮಯೋರ್ ಕಂಪನಿಯು ಉತ್ತಮ ಮಟ್ಟದಲ್ಲಿ ಬೆಳೆಯಲಿ ಎಂದು ಹಾರೈಸಿದರು. ಸದರಿ ಕಂಪನಿಯು ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಲು ಬೇಷರತ್ ಪರವಾನಿಗೆಯನ್ನು ನೀಡುವಂತೆ ಮನವಿ ಮಾಡಿದರು.

11. **ಶ್ರೀ ಆನಂದ್ ರಾವ್ ವೈ.ಹೆ, ಗ್ರಾಮ ಪಂಚಾಯ್ತಿ ಸದಸ್ಯರು–** ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯು ಇದುವರೆಗೂ 94% ಸ್ಥಳೀಯರಿಗೆ ಉದ್ಯೋಗ ನೀಡಿರುವುದಾಗಿ ತಿಳಿಸಿದರು. ಮುಂದಿನ ದಿನಗಳಲ್ಲಿ ಶೇಕಡಾ 99% ರಷ್ಟು ಸ್ಥಳೀಯರಿಗೆ ಉದ್ಯೋಗಗಳನ್ನು ನೀಡುತ್ತದೆ ಎಂಬ ಭರವಸೆಯನ್ನು ವ್ಯಕ್ತಪಡಿಸಿದರು. ಕೋವಿಡ್ ಸಂದರ್ಭದಲ್ಲಿ ಸ್ಮಯೋರ್ ಕಂಪನಿಯು ಸ್ಥಳೀಯರಿಗೆ ಎಲ್ಲಾ ರೀತಿಯ ಸೌಕರ್ಯಗಳನ್ನು ಒದಗಿಸುವ ಕಾರ್ಯವನ್ನು ಸಮರ್ಥವಾಗಿ ನಿಭಾಯಿಸಿರುವುದಾಗಿ ತಿಳಿಸಿದರು, ವಸತಿ, ಶಿಕ್ಷಣ ಕ್ಷೇತ್ರದಲ್ಲಿ ಕಂಪನಿಯು ಸ್ಥಳೀಯರಿಗೆ ಅನುಕೂಲ ಮಾಡಿಕೊಟ್ಟಿರುವುದಾಗಿ ತಿಳಿಸಿದರು. ಕಂಪನಿಯು ಉತ್ಪಾದನೆಯನ್ನು ಹೆಚ್ಚಿಸಲು ಅನುಮತಿ ನೀಡುವಂತೆ ಮನವಿ ಮಾಡಿದರು.

12. **ಶ್ರೀ ಎರಿಸ್ವಾಮಿ, ಲಾರಿ ಮಾಲೀಕರ ಸಂಘದ ಅಧ್ಯಕ್ಷರು, ಕಮ್ಮತ್ತೂರು–** ರವರು ಮಾತನಾಡುತ್ತಾ ಕಂಪನಿಗೆ ಉತ್ಪಾದನೆಯನ್ನು ಹೆಚ್ಚಿಸಿಕೊಳ್ಳಲು ಅನುಮತಿ ನೀಡುವುದಕ್ಕೆ ತಮ್ಮ ಅಭ್ಯಂತರವಿಲ್ಲ ಎಂದರು. ಕಮ್ಮತ್ತೂರು ಗ್ರಾಮವನ್ನು ದತ್ತು ಗ್ರಾಮ ಎಂದು ಘೋಷಿಸಿ ತಮ್ಮ ಗ್ರಾಮದವರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಖಾಯಂ ಉದ್ಯೋಗಗಳನ್ನು ನೀಡುವಂತೆ ಮನವಿ ಮಾಡಿದರು.

13. **ಶ್ರೀ ಯಲ್ಲಪ್ಪ ಕಮ್ಮತ್ತೂರು ಗ್ರಾಮ–** ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಗೆ ಪರವಾನಿಗೆ ನೀಡುವಂತೆ ಕೋರಿದರು. ಕಂಪನಿಯು ತಮ್ಮ ಗ್ರಾಮಕ್ಕೆ ಮೂಲಭೂತ ಸೌಕರ್ಯಗಳಾದ ಸಾರಿಗೆ, ಶಿಕ್ಷಣ,ರಸ್ತೆ ನಿರ್ಮಾಣ ಮತ್ತು ಆರೋಗ್ಯ ಸೌಲಭ್ಯಗಳನ್ನು ಒದಗಿಸಿರುವುದಾಗಿ ತಿಳಿಸಿದರು. ತಮ್ಮ ಗ್ರಾಮದ ನಿವಾಸಿಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗಗಳನ್ನು ನೀಡುವಂತೆ ಮನವಿ ಮಾಡಿದರು.

14. **ಶ್ರೀ ಹೆಚ್ ಭರಮಪ್ಪ, ನಾರಾಯಣಪುರ ಗ್ರಾಮ–** ರವರು ಮಾತನಾಡುತ್ತಾ ನಾರಯಣಪುರ ಗ್ರಾಮದವರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗಗಳನ್ನು ನೀಡುವಂತೆ ಮನವಿ ಮಾಡಿದರು. ಕಂಪನಿಯು ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಅನುಮತಿ ನೀಡುವಂತೆ ಮನವಿ ಮಾಡಿದರು.

15. **ಶ್ರೀ ಹನುಮಂತಪ್ಪ, ಮುಖ್ಯ ಶಿಕ್ಷಕರು, ಸ್ಮಯೋರ್ ಪ್ರೌಢಶಾಲೆ–** ರವರು ಮಾತನಾಡುತ್ತಾ, ತಮ್ಮದು ಅನುದಾನಿತ ಪ್ರೌಢಶಾಲೆಯಾಗಿದ್ದು ಶಾಲೆಗೆ ಸಿಗಬೇಕಾದ ಎಲ್ಲಾ ಸವಲತ್ತುಗಳನ್ನು ಸ್ಮಯೋರ್ ಕಂಪನಿಯು ನೀಡಿರುವುದಾಗಿ ತಿಳಿಸಿದರು. ಕಂಪನಿಯು ಶಾಲಾ ಶಿಕ್ಷಕರುಗಳಿಗೆ ಉಚಿತವಾಗಿ ವಸತಿ ಸೌಲಭ್ಯವನ್ನು ಒದಗಿಸಿರುವುದಾಗಿ ತಿಳಿಸಿದರು. ತಮ್ಮ ಶಾಲೆಯಲ್ಲಿ 235 ವಿದ್ಯಾರ್ಥಿಗಳುವ್ಯಾಸಂಗ ಮಾಡುತ್ತಿದ್ದು ಎಲ್ಲಾ ವಿದ್ಯಾರ್ಥಿಗಳಿಗೂ ಕಂಪನಿಯು ಸಹಾಯ ಮಾಡುತ್ತಿರುವುದಾಗಿ ತಿಳಿಸಿದರು. ಸ್ಮಯೋರ್ ಕಂಪನಿಯು ತನ್ನ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಲು ಅನುಮತಿ ನೀಡುವಂತೆ ಮನವಿ ಮಾಡಿದರು.

16. **ಶ್ರೀ ಆನಂದ್ ಬಳ್ಳಾರಿ ಜಿಲ್ಲಾ ಗಣಿ ಕಾರ್ಮಿಕರ ಸಂಘ, ಸಂಡೂರು–** ರವರು ಮಾತಾನಾಡುತ್ತಾ ಸ್ಮಯೋರ್ ಕಂಪನಿಯು ಉತ್ಪಾದನೆಯನ್ನು ಹೆಚ್ಚಿಸಿಕೊಳ್ಳಲು, ಪರವಾನಿಗೆಯನ್ನು ನೀಡಲು ಯಾವುದೇ ಅಭ್ಯಂತರವಿಲ್ಲ ಎಂದು ತಿಳಿಸಿದರು. ಸ್ಮಯೋರ್ ಕಂಪನಿಯು ಸಂಡೂರಿನ ಜನತೆಗೆ ಕಾಮಧೇನು ಇದ್ದಂತೆ ಎಂದು

ಅಭಿಪ್ರಾಯ ಪಟ್ಟರು. ಕಂಪನಿಯು ಸಾಮಾಜಿಕವಾಗಿ, ಸಾಂಸ್ಕೃತಿಕವಾಗಿ ಮತ್ತು ಶೈಕ್ಷಣಿಕವಾಗಿ ಸ್ಥಳೀಯರಿಗೆ ಅನುಕೂಲಗಳನ್ನು ಮಾಡಿರುವದಾಗಿ ತಿಳಿಸಿದರು. ಸದರಿ ಯೋಜನೆಗೆ ಪರವಾನಿಗಿಯನ್ನು ನೀಡುವಂತೆ ಮನವಿ ಮಾಡಿದರು.

17. **ಶ್ರೀ ಮಲ್ಲೇಶ್, ಕಮ್ಮತ್ತೂರು ಗ್ರಾಮ**– ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯು ತಮ್ಮ ಗ್ರಾಮಕ್ಕೆ ಎಲ್ಲಾ ರೀತಿಯಲ್ಲಿಯೂ ಅನುಕೂಲ ಮಾಡಿರುವುದಾಗಿ ತಿಳಿಸಿದರು. ಮುಂದಿನ ದಿನಗಳಲ್ಲಿ ಕಮ್ಮತ್ತೂರು ಗ್ರಾಮಕ್ಕೆ ಅತೀ ಹೆಚ್ಚಿನ ಅಭಿವೃದ್ಧಿ ಕೆಲಸಗಳನ್ನು ಮಾಡಿಕೊಡುವಂತೆ ಕಂಪನಿಯವರಲ್ಲಿ ಮನವಿ ಮಾಡುತ್ತಾ ಸದರಿ ಯೋಜನೆಗೆ ತಮ್ಮ ಸಹಮತ ವ್ಯಕ್ತಪಡಿಸಿದರು.

18. **ಶ್ರೀ ಶಿವಪ್ರಕಾಶ, ತೋಣಸಗೇರೆ ಗ್ರಾಮ**– ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯು ತಮ್ಮ ಗ್ರಾಮಕ್ಕೆ ಕಡಿಮೆ ಪ್ರಮಾಣದಲ್ಲಿ ಅನುಕೂಲಗಳನ್ನು ಮಾಡಿರುವುದಾಗಿ ಆರೋಪಿಸಿದರು. ತಮ್ಮ ಗ್ರಾಮದ ರೈತರಿಗೆ ಧೂಳಿನ ಪರಿಹಾರವನ್ನು ನೀಡಿರುವುದಿಲ್ಲ ಎಂದು ತಿಳಿಸಿದರು. ತಮ್ಮ ಗ್ರಾಮದವರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗಗಳನ್ನು ನೀಡುವಂತೆ ಮನವಿ ಮಾಡಿದರು. ತಮ್ಮ ಗ್ರಾಮಕ್ಕೆ ರಸ್ತೆಗಳನ್ನು ನಿರ್ಮಾಣ ಮಾಡುವಂತೆ ಗ್ರಾಮದ ಸ್ಮಶಾನವನ್ನು ಅಭಿವೃದ್ಧಿ ಪಡಿಸುವಂತೆ ಕಂಪನಿಯವರಲ್ಲಿ ಮನವಿ ಮಾಡಿದರು.

19. **ಶ್ರೀ ರಾಜು ಪಾಳೇಯಗಾರ್, ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷರು, ಸಂಡೂರು**– ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯು ಸುತ್ತಮುತ್ತಲಿನ 9 ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿರುವುದಾಗಿ ತಿಳಿಸಿದರು. ಮುಂದಿನ ದಿನಗಳಲ್ಲಿ ಸ್ಥಳೀಯ ಗ್ರಾಮಗಳಿಗೆ ಹೆಚ್ಚಿನ ಸವಲತ್ತುಗಳನ್ನು ನೀಡುವಂತೆ ಮನವಿ ಮಾಡಿದರು.ಸಂಡೂರಿನಲ್ಲಿರುವ ಗಣಿ ಕಂಪನಿಗಳಲ್ಲಿ ಹೋಲಿಸಿದರೆ ಸ್ಮಯೋರ್ ಕಂಪನಿಯು ತಮ್ಮ ಕಾರ್ಮಿಕರಿಗೆ ಹೆಚ್ಚಿನ ಪ್ರಮಾಣದಲ್ಲಿ ಸೌಲಭ್ಯವನ್ನು ಒದಗಿಸಿರುವುದಾಗಿ ತಿಳಿಸಿದರು. ಕರೋನಾ ಸಮಯದಲ್ಲಿ ಒಂದು ವರ್ಷ ಕಂಪನಿಯು ಸ್ಥಗಿತಗೊಂಡಿದ್ದಾಗಲೂ ತನ್ನ ಕಾರ್ಮಿಕರಿಗೆ ವೇತನವನ್ನು ನೀಡಿರುವುದಾಗಿ ತಿಳಿಸಿದರು. ಸ್ಮಯೋರ್ ಕಂಪನಿಯು ಉತ್ಪಾದನೆಯನ್ನು ಹೆಚ್ಚಿಸಿಕೊಳ್ಳುವ ಯೋಜನೆಗೆ ಎಲ್ಲಾ ಸಂಘ ಸಂಸ್ಥೆಗಳು ಬೆಂಬಲವನ್ನು ನೀಡುವುದಾಗಿ ತಿಳಿಸಿ ಸದರಿ ಯೋಜನೆಗೆ ಅನುಮತಿ ನೀಡುವಂತೆ ಮನವಿ ಮಾಡಿದರು.

20. **ಶ್ರೀಮತಿ ಮಂಜುಳ ಜ್ಞಾನಸೇವಾ ಕೇಂದ್ರ ಚಿತ್ರದುರ್ಗ**– ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯು ಸುತ್ತಮುತ್ತಲಿನ ಗ್ರಾಮಗಳಿಗೆ ಎಲ್ಲಾ ರೀತಿಯ ಸೌಕರ್ಯಗಳನ್ನು ಒದಗಿಸಿಕೊಟ್ಟು ಸ್ಥಳೀಯರ ಮನಸ್ಸಿನಲ್ಲಿ ಕಂಪನಿಯು ನೆಲೆಯಾಗಿದೆ ಎಂದು ತಿಳಿಸಿದರು. ಮುಂದಿನ ದಿನಗಳಲ್ಲಿ ಕಂಪನಿಯು ಸ್ಥಳೀಯರಿಗೆ ಅನುಕೂಲಗಳನ್ನು ಮಾಡುವಂತೆ ಮನವಿ ಮಾಡಿದರು. ಕಂಪನಿಯು ಅಭಿವೃದ್ಧಿ ಹೊಂದುವುದರ ಜೊತೆಗೆ ಸ್ಥಳಿಯ ಗ್ರಾಮಗಳ ಒಳ್ಳೆಯ ಬೆಳವಣಿಗೆಗೆ ಸಹಾಯ ಮಾಡಲಿ ಎಂದು ಆಶಿಸುತ್ತಾ ಕಂಪನಿಯವರಿಗೆ ಶುಭ ಹಾರೈಸಿದರು.

21. **ಶ್ರೀ ಬಿ.ವಿ ರೆಡ್ಡಿ, ಪರಿಸರವಾದಿ ಬಳ್ಳಾರಿ**– ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯು ತನ್ನ ಉತ್ಪಾದನಾ ಸಾಮರ್ಥ್ಯ ವನ್ನು ಹೆಚ್ಚಿಸುಕೊಳ್ಳುವ ಪ್ರಸ್ತಾವನೆಗೆ ಒಪ್ಪಿಗೆ ನೀಡುವಂತೆ ಮನವಿ ಮಾಡಿದರು.

22. **ಶ್ರೀ ಸುನಂದಾರೆಡ್ಡಿ, ಪರಿಸರವಾದಿ**– ರವರು ಮಾತನಾಡುತ್ತಾ ಸ್ಮಯೋರ್ ಕಂಪನಿ ಆಡಳಿತ ವರ್ಗಕ್ಕೆ ಶುಭ ಹಾರೈಸಿದರು. ಸದರಿ ಯೋಜನೆಗೆ ಬೇಷರತ್ ಒಪ್ಪಿಗೆ ನೀಡುವಂತೆ ಪರಿಸರ ಮಂತ್ರಾಲಯಕ್ಕೆ ಶಿಫಾರಸ್ಸು ಮಾಡುವಂತೆ ಅಧಿಕಾರಿಗಳಲ್ಲಿ ಮನವಿ ಮಾಡಿದರು. ಕಂಪನಿಯವರು ಸರ್ಕಾರಕ್ಕೆ ಪರಿಸರ ವಿಮೋಚನಾ ಪತ್ರ ಪಡೆಯಲು ಅರ್ಜಿ ಸಲ್ಲಿಸಿದಾಗ 90 ದಿನಗಳಲ್ಲಿ ಎಲ್ಲಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ ಕಂಪನಿಗೆ ಪರಿಸರ ವಿಮೋಚನಾ ಪತ್ರ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಿದರು. ಕಂಪನಿಯು ಹೆಚ್ಚಿನ ಪ್ರಮಾಣದಲ್ಲಿ ಹಸಿರು ಪಟ್ಟಿಯನ್ನು ಅಭಿವೃದ್ಧಿ ಪಡಿಸಿರುವುದಾಗಿ ತಿಳಿಸಿದರು. ಸದರಿ ಯೋಜನೆಗೆ ಅನುಮತಿ ನೀಡುವಂತೆ ಮನವಿ ಮಾಡಿದರು.

23.**ಶ್ರೀಮತಿ ಗೀತಾ, ಬಳ್ಳಾರಿ**- ರವರು ಮಾತನಾಡುತ್ತಾ ಕಂಪನಿಯು ಸಾಮರ್ಥ್ಯವನ್ನು ಹೆಚ್ಚಿಸುವುದರಿಂದ ಡಿಪ್ಲೋಮ, ಐಟಿಐ ವಿದ್ಯಾಭ್ಯಾಸ ಮಾಡಿದರವರಿಗೆ ಉದ್ಯೋಗ ದೊರೆಯುತ್ತದೆ ಎಂದು ತಿಳಿಸಿದರು. ಎಲ್ಲಾರಿಗೂ ಶುಭ ಹಾರೈಸುವುದಾಗಿ ತಿಳಿಸಿದರು.

24.**ಶ್ರೀ ನಾಜೀಮ್ ಶೇಕ್, ದೇವಗಿರಿ ಗ್ರಾಮ**- ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯುಂದ ಯಾವುದೇ ತೊಂದರೆ ಇಲ್ಲ ಎಂದರು. ತಮ್ಮ ಗ್ರಾಮದವರಿಗೆ ಹೆಚ್ಚಿನ ಸಂಖ್ಯೆಯಲ್ಲಿ ಕೆಲಸ ನೀಡುವಂತೆ ಮನವಿ ಮಾಡಿದರು.

25.**ಶ್ರೀ ವೆಂಕಟೇಶ್ ಸುಬ್ಬಾರಾಯನಹಳ್ಳಿ**- ರವರು ಮಾತನಾಡುತ್ತಾ ಸ್ಮಯೋರ್ ಕಂಪನಿಯು ತಮ್ಮ ಗ್ರಾಮಕ್ಕೆ ಎಲ್ಲಾ ರೀತಿಯಲ್ಲಿ ಅನುಕೂಲ ಮಾಡಿದ್ದಾರೆ ಎಂದು ತಿಳಿಸಿದರು. ಸ್ಥಳೀಯರಿಗೆ ಉದ್ಯೋಗ ನೀಡುತ್ತಿರುವುದರಿಂದ ಕಂಪನಿಗೆ ಉತ್ಪಾದನೆಯನ್ನು ಹೆಚ್ಚಿಸಲು ಅನುಮತಿ ನೀಡುವಂತೆ ಮನವಿ ಮಾಡಿದರು.

ಕೊನೆಯಲ್ಲಿ ಸಾರ್ವಜನಿಕ ಆಲಿಕೆ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ), ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರು ತಮ್ಮ ಅಧ್ಯಕ್ಷೀಯ ಮಾತುಗಳನ್ನಾಡುತ್ತ, ಸದರಿ ಸಭೆಯು ಪರಿಸರ ಸಾರ್ವಜನಿಕ ಸಭೆಯಾಗಿದ್ದು, ಇದರಲ್ಲಿ ಎಲ್ಲರಿಗೂ ಮಾತನಾಡಲು ಮುಕ್ತ ಅವಕಾಶವನ್ನು ಕಲ್ಪಿಸಲಾಗಿದೆ. ಹಾಗು ತಾವು ಮಾತನಾಡಿದ ಪರ/ವಿರೋಧ ಅಭಿಪ್ರಾಯಗಳನ್ನ ದಾಖಲಿಸಲಾಗಿದೆ. ಈ ಸಭೆಯಲ್ಲಿ ನಾವುಗಳು ಯಾವುದೇ ತಿರ್ಮಾನ ತೆಗೆದುಕೊಳ್ಳುವದಿಲ್ಲ. ಈ ಸಭೆಯ ಉದ್ದೇಶ ಸಾರ್ವಜನಿಕರ ಅಭಿಪ್ರಾಯ ಹಾಗೂ ಸಲ್ಲಿಸಿರುವ ಮೌಖಿಕ ಮತ್ತು ಲಿಖಿತ ಅಭಿಪ್ರಾಯಗಳನ್ನು ಸಂಗ್ರಹಿಸಿ, ಹಾಗೂ ತಾವುಗಳು ಸಲ್ಲಿಸಿರುವ ಮನವಿಗಳು, ಹೆಚ್ಚಿನ ಸಂಖ್ಯೆಯ ಲಿಖಿತ ಅಭಿಪ್ರಾಯಗಳು/ ಸಲಹೆಗಳು/ಆಕ್ಷೇಪಣೆಗಳನ್ನು ಸ್ವೀಕರಿಸಿದ್ದೇವೆ. ಅದನ್ನು ದಾಖಲಿಸಲಾಗುವುದು. ಈ ಸಭೆಯ ನಡವಳಿಯನ್ನು ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ದಾಖಲಿಸಿ, ಛಾಯಾಚಿತ್ರಗಳ (ಪ್ರತಿಯನ್ನು **ಅನುಬಂಧ-7** ರಲ್ಲಿ ಲಗತ್ತಿಸಲಾಗಿದೆ) ವಿಡಿಯೋ ಇರುವ ಸಿ.ಡಿ. ಗಳ (ಪ್ರತಿಯನ್ನು **ಅನುಬಂಧ-8** ರಲ್ಲಿ ಲಗತ್ತಿಸಲಾಗಿದೆ) ಇದನ್ನು ರಾಜ್ಯ ಮಟ್ಟದ ಪರಿಸರ ಅಘಾತ ಅಧ್ಯಯನ ಪ್ರಾಧಿಕಾರ, ಅರಣ್ಯ, ಜೀವಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

ಇವರಿಗೆ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಕೇಂದ್ರ ಕಛೇರಿ ಬೆಂಗಳೂರು ರವರ ಮುಖಾಂತರ ಕಳುಹಿಸಿಕೊಡಲಾಗುವದು ಎಂದು ತಿಳಿಸಿದರು.

ಈ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡ ಎಲ್ಲಾ ಸಾರ್ವಜನಿಕರಿಗೆ ಮತ್ತು ಸುತ್ತಮುತ್ತಲಿನ ಗ್ರಾಮಸ್ಥರಿಗೆ ಧನ್ಯವಾದಗಳನ್ನು ತಿಳಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಿದರು.

**ಡಾ.ದೊಡ್ಡಕಾನಯ್ಯ**
ಹಿರಿಯ ಪರಿಸರ ಅಧಿಕಾರಿ(ಪ್ರಭಾರ)
ಕ.ರಾ.ಮಾ.ನಿ.ಮಂ.ವಲಯ ಕಛೇರಿ, ಬಳ್ಳಾರಿ

**ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ)**
ಅಪರ ಜಿಲ್ಲಾಧಿಕಾರಿಗಳು ಹಾಗೂ
ಬಳ್ಳಾರಿ ಅಪರ ಜಿಲ್ಲಾ ದಂಡಾಧಿಕಾರಿಗಳು, ಅಧ್ಯಕ್ಷರು
ಜಿಲ್ಲಾ ಪರಿಸರ ಸಾರ್ವಜನಿಕ ಆಲಿಕೆ

## ಅನುಬಂಧ

1. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಅಧಿಕಾರಿಗಳ ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ-1** ರಲ್ಲಿ ಲಗತ್ತಿಸಲಾಗಿದೆ.

2. ಪರಿಸರ ಸಾರ್ವಜನಿಕ ಆಲಿಕೆ ಸಭೆಗೆ ಭಾಗವಹಿಸಿದ ಸಾರ್ವಜನಿಕರ ವಿಳಾಸ ಮತ್ತು ಸಹಿ ಇರುವ ಹಾಜರಾತಿ ವಹಿಯ ಪ್ರತಿಯನ್ನು **ಅನುಬಂಧ-2** ರಲ್ಲಿ ಲಗತ್ತಿಸಲಾಗಿದೆ.

3. ರಾಜ್ಯ ಮಟ್ಟದ ಪ್ರಮುಖ ದಿನ ಪತ್ರಿಕೆಗಳಾದ ಕನ್ನಡಪ್ರಭ (ಕನ್ನಡ) ದಲ್ಲಿ ದಿನಾಂಕ 05-11-2022 ರಂದು ಹಾಗೂ ದಿ ಹಿಂದೂ (ಆಂಗ್ಲ) ಗಳಲ್ಲಿ ದಿನಾಂಕ 05-11-2022 & 06-11-2022 ರಂದು ಪತ್ರಿಕಾ ಪ್ರಕಟಣೆ ಬಳ್ಳಾರಿ ಜಿಲ್ಲೆಯ ಸ್ಥಳೀಯ ದಿನಪತ್ರಿಕೆಯಾದ "ಈ ನಮ್ಮ ಕನ್ನಡ ನಾಡು" ಪತ್ರಿಕೆಯಲ್ಲಿ ದಿನಾಂಕ: 06-11-2022 ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ ಕುರಿತಾದ ಪ್ರಕಟಣೆಯ ಪ್ರತಿಯನ್ನು **ಅನುಬಂಧ-3** ರಲ್ಲಿ ಲಗತ್ತಿಸಲಾಗಿದೆ.

4. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಪ್ರಚಾರಕ್ಕಾಗಿ ದಿನಾಂಕ 02-12-2022 ರಂದು ಕರಪತ್ರಗಳನ್ನು ವಿತರಿಸಲಾದ ಮತ್ತು ಧ್ವನಿವರ್ಧಕಗಳ ಮುಖೇನ ಯೋಜನಾ ಸ್ಥಳದ ಸುತ್ತಮುತ್ತಲ ಗ್ರಾಮಗಳಲ್ಲಿ ಸಾರ್ವಜನಿಕವಾಗಿ ಪ್ರಚಾರ ಮಾಡಲಾದ ಸಮಯದಲ್ಲಿ ತೆಗೆದುಕೊಂಡ ಛಾಯಾಚಿತ್ರಗಳ ಪ್ರತಿಯನ್ನು **ಅನುಬಂಧ-4** ರಲ್ಲಿ ಲಗತ್ತಿಸಲಾಗಿದೆ.

5. ಮಾನ್ಯ ಜಿಲ್ಲಾಧಿಕಾರಿಗಳು, ಬಳ್ಳಾರಿ ರವರ ಅಧಿಕೃತ ಜ್ಞಾಪನಾ ಪತ್ರದ ದಿನಾಂಕ 04-12-2022 ರ ಅನ್ವಯ ಅಪರ ಜಿಲ್ಲಾಧಿಕಾರಿಗಳು ಹಾಗೂ ಅಪರ ಜಿಲ್ಲಾ ದಂಡಾಧಿಕಾರಿಗಳು, ಬಳ್ಳಾರಿ ರವರಿಗೆ ಅಧಿಕಾರ ನೀಡಿ ದಿನಾಂಕ : 06-12-2022 ರಂದು ನಡೆಯುವ ಪರಿಸರ ಆಲಿಕೆ ಸಭೆಯನ್ನು ನಡೆಸಲು ಆದೇಶಿಸಿರುತ್ತಾರೆ. ಸದರಿ ಜ್ಞಾಪನಾ ಪತ್ರದ ಪ್ರತಿಯನ್ನು **ಅನುಬಂಧ-5** ರಂತೆ ಲಗತ್ತಿಸಿದೆ.

6. ಸಾರ್ವಜನಿಕರಿಂದ ಪ್ರಾದೇಶಿಕ ಕಛೇರಿ ಬಳ್ಳಾರಿಯಲ್ಲಿ ಸ್ವೀಕೃತಿಯಾದ ಒಟ್ಟು 37 ಲಿಖಿತ ಹೇಳಿಕೆ/ ಆಕ್ಷೇಪಣೆಗಳು ಸ್ವೀಕೃತಿಯಾಗಿದ್ದು, ಪರಿಸರ ಸಾರ್ವಜನಿಕ ಸಭೆಯ ಸಮಯದಲ್ಲಿ ಒಟ್ಟು 251 ಲಿಖಿತ ಹೇಳಿಕೆ/ ಆಕ್ಷೇಪಣೆಗಳುಸ್ವೀಕೃತಿಯಾಗಿರಯತ್ತವೆ ಅವುಗಳನ್ನು **ಅನುಬಂಧ-6** ರಲ್ಲಿ ಲಗತ್ತಿಸಲಾಗಿದೆ.

7. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಪ್ರಕ್ರಿಯೆಯ ಛಾಯಾಚಿತ್ರಗಳ ಪ್ರತಿಯನ್ನು **ಅನುಬಂಧ-7** ರಲ್ಲಿ ಲಗತ್ತಿಸಲಾಗಿದೆ.

8. ಪರಿಸರ ಸಾರ್ವಜನಿಕ ಆಲಿಕೆ ಸಭೆಯ ಆಡಿಯೋ ಮತ್ತು ವಿಡಿಯೋ ಇರುವ ಸಿ.ಡಿ. ಗಳ ಪ್ರತಿಯನ್ನು **ಅನುಬಂಧ-8** ರಲ್ಲಿ ಲಗತ್ತಿಸಲಾಗಿದೆ.

| | |
|---|---|
| **ಡಾ.ದೊಡ್ಡಶಾಣಯ್ಯ** | **ಶ್ರೀ ಪಿ.ಎಸ್.ಮಂಜುನಾಥ, ಕ.ಆ.ಸೇ(ಹಿರಿಯ ಶ್ರೇಣಿ)** |
| ಹಿರಿಯ ಪರಿಸರ ಅಧಿಕಾರಿ (ಪ್ರಭಾರ) | ಅಪರ ಜಿಲ್ಲಾಧಿಕಾರಿಗಳು ಹಾಗೂ |
| ಕ.ರಾ.ಮಾ.ನಿ.ಮಂ.ವಲಯ ಕಛೇರಿ, ಬಳ್ಳಾರಿ | ಬಳ್ಳಾರಿ ಅಪರ ಜಿಲ್ಲಾ ದಂಡಾಧಿಕಾರಿಗಳು, ಅಧ್ಯಕ್ಷರು |
| | ಜಿಲ್ಲಾ ಪರಿಸರ ಸಾರ್ವಜನಿಕ ಆಲಿಕೆ |